**ಕರ್ನಾಟಕ ಸರ್ಕಾರ**

ಆಯುಕ್ತರು,
ರಾಜ್ಯ ಪುನರ್ವಸತಿ ಮತ್ತು ಪುನರ್‌ನಿರ್ಮಾಣ
ಹಾಗೂ ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 24.07.2017

ಕಂಇ 02 ಸಿಆರ್‌ಆರ್ 2017

## ಪ್ರಕಟಣೆ

ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಪಾರದರ್ಶಕತೆ, ಸೂಕ್ತ ಪರಿಹಾರ ಹಕ್ಕು, ಪುನರ್ವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ, 2013ರ ಕಲಂ–7(2)(ಎ) ಮತ್ತು (ಸಿ)ರನ್ವಯ "ಸಾಮಾಜಿಕ ಪರಿಣಾಮ ನಿರ್ಧರಣಾ ಅಧ್ಯಯನ" ವರದಿಯನ್ನು ಮೌಲ್ಯಮಾಪನ ಮಾಡಿ, ಸಲಹೆ/ಶಿಫಾರಸ್ಸುಗಳನ್ನು ನೀಡುವ ತಂಡವು ಅಧಿಕಾರೇತರ ಸಾಮಾಜಿಕ ವಿಜ್ಞಾನಿಗಳು ಹಾಗೂ ಪುನರ್ವಸತಿ ಮತ್ತು ಪುನರ್‌ವ್ಯವಸ್ಥೆ ವಿಷಯದಲ್ಲಿನ ಪರಿಣಿತರುಗಳನ್ನು ಒಳಗೊಂಡಿರುತ್ತದೆ. ಈ ಸಂಪನ್ಮೂಲ ವ್ಯಕ್ತಿಗಳ ಹೆಸರುಗಳ ಪಟ್ಟಿ(Panel) ತಯಾರಿಸಲು ಅಗತ್ಯ ಅನುಭವ ಹಾಗೂ ಆಯಾ ವಿಷಯಗಳ ಬಗ್ಗೆ ಆಳವಾದ ಜ್ಞಾನ ಹೊಂದಿರುವ ಹಾಗೂ ರಾಷ್ಟ್ರ/ರಾಜ್ಯ ಮಟ್ಟದಲ್ಲಿ ಈ ಹಿಂದೆ ಕಾರ್ಯನಿರ್ವಹಿಸಿರುವ ಅನುಭವವುಳ್ಳ ಅರ್ಹ ಪ್ರತಿಭಾನ್ವಿತರುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಸಲ್ಲಿಸಲು ಇಚ್ಛಿಸುವವರು ಸೂಕ್ತ ವಿದ್ಯಾರ್ಹತೆ ಮತ್ತು ಅಗತ್ಯ ದಾಖಲೆಗೊಂದಿಗೆ ದಿನಾಂಕ: 16.08.2017ರೊಳಗಾಗಿ ಆಯುಕ್ತರು(R&R) ಹಾಗೂ ಪ.ನಿ.ಸರ್ಕಾರದ ಕಾರ್ಯದರ್ಶಿ, ಕಂದಾಯ ಇಲಾಖೆ, ಕೊಠಡಿ ಸಂ.510, 3ನೇ ಹಂತ, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು ಈ ವಿಳಾಸಕ್ಕೆ ಅಂಚೆ ಮೂಲಕ ಅಥವಾ ಖುದ್ದು ಹಾಜರಾಗಿ ಸಲ್ಲಿಸುವಂತೆ ತಿಳಿಸಲಾಗಿದೆ.

M. L. Varalakshmi
(ಎಂ.ಎಲ್.ವರಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಕಂದಾಯ ಇಲಾಖೆ(ಪು&ಪು)